ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಯಲಹಂಕ ವಲಯ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಬ್ಯಾ.ವಿ/ಆ.ಅ/ 01 /2022-23

ಕಾರ್ಯಪಾಲಕ ಅಭಿಯಂತರರು ಕಛೇರಿ
ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ,
ಬೆಂಗಳೂರು-92, ದಿನಾಂಕ: 19/04/2022

ಆಡಳಿತಾತ್ಮಕ ಅನುಮೋದನೆ

ವಿಷಯ: Improvements and Restoration of Roads in Ward No. 05 (Package 01) (Package Consists of 6 works)

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ ನಅಇ 06 ಎಂ.ಎನ್,ವೈ 2021 ದಿನಾಂಕ: 29-04-2021.
2. ಸರ್ಕಾರದ ಆದೇಶ ಸಂಖ್ಯೆ: ನಅಇ 17 ಎಂಎನ್‌ವೈ 2022 (ಇ) ಬೆಂಗಳೂರು, ದಿನಾಂಕ: 12-04-2022.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2020-21ನೇ ಸಾಲಿನ ರಾಜ್ಯ ಸರ್ಕಾರದ ಆಯವ್ಯಯದಲ್ಲಿ 110 ಹಳ್ಳಿಗಳಲ್ಲಿ ಅಗೆದಿರುವ ರಸ್ತೆಗಳನ್ನು ಪುನಶ್ಚೇತನಗೊಳಿಸುವ ಸಲುವಾಗಿ ರೂ, 1000.00 ಕೋಟಿಗಳ ಅನುದಾನವನ್ನು ಮೀಸಲಿಡಿಸಲಾಗಿರುತ್ತದೆ. ಈ ಅನುದಾನದಡಿಯಲ್ಲಿ ಉಲ್ಲೇಖ ಪತ್ರ (1)ರ ಸರ್ಕಾರದ ಆದೇಶದಲ್ಲಿ ವಿಧಾನ ಸಭಾ ಕ್ಷೇತ್ರವಾರು ಅನುದಾನವನ್ನು ಹಂಚಿಕೆ ಮಾಡಲಾಗಿದ್ದು, ಬ್ಯಾಟರಾಯನಪುರ ವಿಧಾನ ಸಭಾ ಕ್ಷೇತ್ರಕ್ಕೆ ಒಟ್ಟು ರೂ. 17.00 ಕೋಟಿಗಳ ಅನುದಾನವನ್ನು ಮಂಜೂರು ಮಾಡಿದ್ದು, ಅದರಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪ ವಿಭಾಗ ರವರು ವಾರ್ಡ್ ಸಂಖ್ಯೆ: 05 ಕ್ಕೆ ಮಂಜೂರಾಗಿರುವ ರೂ. 6.00 ಕೋಟಿಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಮುಂದುವರೆದು ಸರ್ಕಾರದ ಆದೇಶ ಸಂಖ್ಯೆ: ನಅಇ 17 ಎಂಎನ್‌ವೈ 2022 (ಇ) ಬೆಂಗಳೂರು, ದಿನಾಂಕ: 12-04-2022 ರಂತೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಿದ್ದು, ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/21-22, ದಿನಾಂಕ: 18-01-2022ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ: 018 ಕ್ರ.ಸಂ: 05 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
6. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
7. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
8. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
9. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಬಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

19/04

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ,
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

19/04.

1) ಮಾನ್ಯ ಜಂಟಿ ಆಯುಕ್ತರು (ಯಲಹಂಕ) ವಲಯ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.
2) ಕಾರ್ಯಪಾಲಕ ಅಭಿಯಂತರರು (ಗುಣ ನಿಯಂತ್ರಣ) ವಿಭಾಗ ರವರ ಮಾಹಿತಿಗಾಗಿ.